ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 01 ಎಸಿಎಂ(1) 2013-14

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 15-04-2013.

**-:: ಸು ತ್ತೋಲೆ ::-**

**ವಿಷಯ:** 2013ನೇ ವರ್ಷದ ಮೇ-05 ರಂದು ನಡೆಯುವ ವಿಧಾನಸಭಾ ಚುನಾವಣೆಯಲ್ಲಿ 18 ವರ್ಷ ತುಂಬಿದ ಎಲ್ಲಾ ವಿದ್ಯಾರ್ಥಿಗಳು ಮತದಾನ ಮಾಡುವ ಬಗ್ಗೆ.

**ಉಲ್ಲೇಖ:** ಆಯುಕ್ತರು, ಬಿಬಿಎಂಪಿ ರವರ ದೂರವಾಣಿ ದಿ:15-04-2013.

-0000000-

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಆಯುಕ್ತರು, ಬಿಬಿಎಂಪಿ ರವರ ದೂರವಾಣಿ ಆದೇಶದಂತೆ 2013ನೇ ವರ್ಷದ ಮೇ-05 ರಂದು ನಡೆಯುವ ವಿಧಾನಸಭಾ ಚುನಾವಣೆಯಲ್ಲಿ ಮತದಾನ ಮಾಡಲು ರಾಜ್ಯ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಗಳಲ್ಲಿ ವ್ಯಾಸಂಗ ಮಾಡುತ್ತಿರುವ 18 ವರ್ಷ ತುಂಬಿದ ಎಲ್ಲಾ ವಿದ್ಯಾರ್ಥಿಗಳು ಮತದಾನದಲ್ಲಿ ಪಾಲ್ಗೊಳ್ಳಬೇಕಾಗಿದ್ದು, ಇದರ ಬಗ್ಗೆ ನಿರ್ದೇಶಕರ ಸಮ್ಮುಖದಲ್ಲಿ ದಿನಾಂಕ:24-04-2013ರಂದು ಬೆಳಿಗ್ಗೆ 10.00 ಗಂಟೆಗೆ ಸಭೆಯನ್ನು ಏರ್ಪಡಿಸಲಾಗಿದ್ದು, (ಸ್ಥಳ: ತಾಂತ್ರಿಕ ಮುದ್ರಣ ತಂತ್ರಜ್ಞಾನ ಸಂಸ್ಥೆ, ಅರಮನೆ ರಸ್ತೆ, ಬೆಂಗಳೂರು – 01) ಈ ಸಭೆಯಲ್ಲಿ ಎಲ್ಲಾ ಪ್ರಾಂಶುಪಾಲರುಗಳು ತಪ್ಪದೇ ಭಾಗವಹಿಸಬೇಕಾಗಿ ಈ ಮೂಲಕ ಸೂಚಿಸಲಾಗಿದೆ.

ನಿರ್ದೇಶಕರು

*ರಾಜ್ಯ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ*

ಪ್ರತಿ: ಆಯುಕ್ತರು B.B.M.P. ಬೆಂಗಳೂರು

1. ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
2. ನಿರ್ದೇಶಕರ ಆಪ್ತಶಾಖೆಗೆ.
3. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾ.ಶಿ.ನಿ
4. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು – **ಸದರಿ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು**
5. ಕಛೇರಿ ಪ್ರತಿ.